ರಾಜ್ಯಾದ್ಯಂತ ಸಂವಿಧಾನ ಓದು

ವಿಧಾನಸೌಧದ ಮುಂಭಾಗ ಸಂವಿಧಾನ ಪೀಠಿಕೆ ಓದಿ ಪ್ರಜಾಪ್ರಭುತ್ವ ದಿನಾಚರಣೆಗೆ ಸಿಎಂ ಚಾಲನೆ

(ಸಂಜೆವಾಣಿ ಪ್ರತಿನಿಧಿಯಿಂದ)

ಬೆಂಗಳೂರು, ಜೆ. 15- ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವಾದ ಇಂದು ಸಂವಿಧಾನ 'ಪೀಠಿಕೆ ಓದು' ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಚಾಲನೆ ನೀಡಿದರು. ವಿಧಾನಸೌಧದ ಪೂರ್ವದ್ವಾರದಲ್ಲಿರುವ ಅಡ್ಡೂರಿ ಮೆಟ್ಟಿಲುಗಳಮೇಲೆಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಂವಿಧಾನ ಪೀಠಿಕೆಯನ್ನು ಓದುವ ಮೂಲಕ ಕಾರ್ಯಕ್ರಮಕ್ಕೆಚಾಲನೆನೀಡಿದರು.

ಸಮಾಜ ಕಲ್ಯಾಣ ಇಲಾಖೆ ಭಾರತದ ಸಂವಿಧಾನ ಪೀಠಿಕೆಯ ಜಾಗತಿಕವಾಚನಕಾರ್ಯಕ್ರಮವನ್ನು ಆಯೋಜಿಸಿದ್ದು, ಇಡೀರಾಜ್ಯದ್ಯಂತ ಈಕಾರ್ಯಕ್ರಮನಡೆದಿದೆ.ಸಂವಿಧಾನ ಪೀಠಿಕೆ ಓದು ಕಾರ್ಯಕ್ರಮ ಏಕಕಾಲದಲ್ಲಿ ರಾಜ್ಯದ ವಿವಿಧೆಡೆ ನಡೆದಿದ್ದು,ಗ್ರಾಮಪಂಚಾಯ್ತಿಯಿಂದ ಹಿಡಿದು ಸಚಿವಾಲಯದವರೆಗಿನ ಎಲ್ಲ ಕಚೇರಿಗಳಲ್ಲೂ ಸಂವಿಧಾನ ಪೀಠಿಕೆ ಓದುವ ಕಾರ್ಯಕ್ರಮ ನಡೆಯಿತು.

ಕರ್ನಾಟಕ ಸೇರಿದಂತೆ ದೇಶದ ಹಾಗೂ ವಿದೇಶಗಳಿಂದ ಸುಮಾರು 2.2 ಕೋಟಿ ಜನ ಸಂವಿಧಾನ ಪೀಠಿಕೆ ಓದು ಕಾರ್ಯಕ್ರಮಕ್ಕೆ ನೋಂದಣಿ ಮಾಡಿಕೊಂಡಿದ್ದು, ಸರ್ಕಾರಿ ಕಚೇರಿಗಳಲ್ಲದೆ ಸಂಘ ಸಂಸ್ಥೆಗಳು,ಕಂಪನಿಗಳು,ಬಹುರಾಷ್ಟ್ರೀಯ ಕಂಪನಿಗಳು ಬ್ಯಾಂಕುಗಳೆಲ್ಲೂ ಕೂಡ ಸಂವಿಧಾನ ಪೀಠಿಕೆ ಓದುವ ಕಾರ್ಯಕ್ರಮ ನಡೆಯಿತು.

ಪ್ರತಿಜಿಲ್ಲೆಯಲ್ಲೂ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಓದುವ ಕಾರ್ಯಕ್ರಮ ನಡೆಯಬೇಕಿತ್ತು. ಕೋಟ್ಯಂತರ ಜನ ಸಂವಿಧಾನ ಪೀಠಿಕೆ ಓದುವ ಕಾರ್ಯಕ್ರಮದಲ್ಲಿ ಭಾಗಿಯಾಗುವ ಮೂಲಕ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು

ಪುಟ 7

ಮನುಸ್ಮೃತಿ ಜಾರಿಗೆ ಹುನ್ನಾರ

ಸಂವಿಧಾನ ವಿರೋಧಿ ಶಕ್ತಿಗಳು ಮತ್ತೆ ಮನುಸ್ಮೃತಿ ಜಾರಿಗೆ ಹುನ್ನಾರ ನಡೆಸುತ್ತಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಸಿದ್ದರಾಮಯ್ಯ ಹೇಳಿದರು.

ರಾಜ್ಯದ ಸಮಾಜಕಲ್ಯಾಣ ಇಲಾಖೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ದಿನವಾಗಿ ವಿಧಾನಸೌಧದ ಪೂರ್ವ ಭಾಗದ ಅಡ್ಡೂರಿ ಮೆಟ್ಟಿಲುಗಳ ಮೇಲೆ ಆಯೋಜಿಸಿದ್ದ ಭಾರತದ ಸಂವಿಧಾನ ಪೀಠಿಕೆಯ ಜಾಗತಿಕ ವಾಚನದ ಕಾರ್ಯಕ್ರಮವನ್ನು ಸಂವಿಧಾನ ಪೀಠಿಕೆ ಓದುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನದ ಆಶಯಗಳನ್ನು ಅರ್ಥೈಸಿಕೊಂಡು ಪಾಲಿಸದಿದ್ದರೆ ಸಮಸಮಾಜ ನಿರ್ಮಾಣ ಸಾಧ್ಯವಿಲ್ಲ ಎಂದರು. ಸಂವಿಧಾನ ವಿರೋಧಿ ಶಕ್ತಿಗಳು ಸಂವಿಧಾನವನ್ನು ನಾಶಗೊಳಿಸಿ ಮತ್ತೆ ಮನುಸ್ಮೃತಿ ಜಾರಿಗೆ ಹುನ್ನಾರ ನಡೆಸುತ್ತಿವೆ.

ಪುಟ 7

ಸಮಾಜ ಕಲ್ಯಾಣ ಇಲಾಖೆ ವಿಧಾನಸೌಧದಲ್ಲಿ ಆಯೋಜಿಸಿದ್ದ ಭಾರತದ ಸಂವಿಧಾನ ಪೀಠಿಕೆಯ ಜಾಗತಿಕ ವಾಚನ ಬೃಹತ್ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂವಿಧಾನ ಪೀಠಿಕೆ ಓದುವ ಮೂಲಕ ಉದ್ಘಾಟಿಸಿದರು. ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಹೆಚ್.ಸಿ.ಮಹದೇವಪ್ಪ, ಜಿ.ಪರಮೇಶ್ವರ್, ಪ್ರಿಯಾಂಕ್ ಖರ್ಗೆ, ಮುನಿಯಪ್ಪ, ರಾಮಲಿಂಗಾರೆಡ್ಡಿ, ಶಿವರಾಜ್ ತಂಗಡಗಿ, ಮಂಕಾಳ ವೈದ್ಯ, ಸತೀಶ್ ಜಾರಕಿಹೊಳಿ, ಕೆ.ಜೆ.ಜಾರ್ಜ್, ಈಶ್ವರ್ ಖಂಡ್ರೆ, ವಿಧಾನಪರಿಷತ್ ಸಭಾಪತಿ ಹೊರಟ್ಟಿ ಇದ್ದಾರೆ